ಸಾಕ್ಷಿಯನ್ನು ದಿಃ03-06-2026 ರಂದು ಪುನಃ ಕರೆಯಿಸಿ ಸತ್ಯ ಪ್ರತಿಜ್ಞೆ ಮಾಡಲಾಯಿತು.

**ಮುಖ್ಯ ವಿಚಾರಣೆಃ ಶ್ರೀಮತಿ ಕೆ ಎಮ್ ಎಮ್ ವಕೀಲರಿಂದಃ (ಎದುರುದಾರ ಪರ )**

ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರ ಸಲ್ಲಿಸಿದ್ದು, ಅದರಲ್ಲಿರುವ ಎಲ್ಲ ವಿಷಯಗಳನ್ನು ನಾನೇ ಹೇಳಿ ಬರೆಯಿಸಿದ್ದು, ಸದರಿ ವಿಷಯಗಳು ಸರಿಯಾಗಿದ್ದು, ಸತ್ಯವಾಗಿರುತ್ತವೆ ಎಂದು ಪ್ರಮಾಣಿಕರಿಸುತ್ತೇನೆ.

ಎದುರುದಾರ ಸಂಸ್ಥೆ ನೀಡಿದ ಅಧಿಕಾರ ಪತ್ರ ನಿಆರ್ಃ 1 ಎಂದು ಗುರುತಿಸಿದೆ.

ಕಾರಣ ಅರ್ಜಿಯನ್ನು ವಜಾಗೊಳಿಸಲು ವಿನಂತಿಸಿಕೊಳ್ಳುತ್ತೇನೆ.

**ಪಾಟೀ ಸವಾಲುಃ ಶ್ರೀ ಜಿ.ಪಿ.ಕೆ. ವಕೀಲರಿಂದ (ಅರ್ಜಿದಾರರ ಪರವಾಗಿ)**

ಅಪಘಾತದ ಸಮಯದಲ್ಲಿ ನಾನೇ ಬಸ್ಸ್ ಚಲಾಯಿಸುತ್ತಿದ್ದೆ ಎಂದರೆ ಸರಿ. ಅರ್ಜಿದಾರ ಆ ದಿನ ನಮ್ಮ ಬಸ್ಸಿನಲ್ಲಿ ಪ್ರಯಾಣಿಸುತ್ತಿದ್ದ ಎಂದರೆ ಸರಿ. ನನ್ನ ತಪ್ಪಿನಿಂದ ಅಪಘಾತ ಆಗಿದೆ ಎಂದು ಪೊಲೀಸರು ನನ್ನ ವಿರುದ್ದ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದಾರೆ ಎಂದರೆ ಸರಿ. ಬಸ್ಸ ನಿಗದಿತ ಸ್ಥಳಕ್ಕೆ ಬಿಡುವ ಮೊದಲು ವಾಹನದ ಟಯರ ಸೇರಿದಂತೆ ಎಲ್ಲ ರೀತಿಯಿಂದ ಪರೀಕ್ಷಿಸುತ್ತೆವೆ ಎಂದರೆ ಸರಿ. ಅಪಘಾತ ನನ್ನ ತಪ್ಪಿನಿಂದ ಆಗಿದೆ ಎಂದರೆ ಸರಿಯಲ್ಲ. ನನ್ನ ತಪ್ಪಿನಿಂದ ಅಪಘಾತ ಆಗಿರುವುದರಿಂದ ಅರ್ಜಿದಾರರಿಗೆ ಪರಿಹಾರ ನೀಡಲು ಎದುರುದಾರರು ಭಾದ್ಯಸ್ಥರು ಎಂದರೆ ಸರಿಯಲ್ಲ. ಪರಿಹಾರ ನೀಡುವ ಜಬಾಬ್ದಾರಿಯಿಂದ ತಪ್ಪಿಸಿಕೊಳ್ಳಲು ಮೇಲಾಧಿಕಾರಿಗಳ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)
ಓ ಹೇ ಕೇ ಸರಿ ಇದೆ.

ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು,
ಗದಗ.